# ಮೂಲ ದಾಖಲಾತಿ ಪರಿಶೀಲನೆಗೆ ಹಾಜರಾಗುತ್ತಿರುವ ಅಭ್ಯರ್ಥಿಗಳ ಗಮನಕ್ಕಾಗಿ

## ಮೂಲ ದಾಖಲಾತಿ ಪರಿಶೀಲನೆಗೆ ಹಾಜರುಪಡಿಸಲು ಮೂಲ ದಾಖಲಾತಿಗಳು/ಜೆರಾಕ್ಸ್ ಪ್ರತಿಗಳನ್ನು ಜೋಡಿಸಿಕೊಳ್ಳುವ ವಿಧಾನ

1. ಆನ್-ಲೈನ್ ಮೂಲಕ ಸಲ್ಲಿಸಿರುವ ಅರ್ಜಿ/ಅರ್ಜಿಗಳಿಗೆ ಇತ್ತೀಚಿನ ಭಾವಚಿತ್ರವನ್ನು ಅಂಟಿಸಿ ಸ್ವ ದೃಢೀಕರಿಸಿ ಸಹಿ ಮಾಡಿರುವ ಅರ್ಜಿ/ಅರ್ಜಿಗಳ ಮೂಲ ಪ್ರತಿ.
2. ಎಸ್.ಎಸ್.ಎಲ್.ಸಿ ಅಂಕಪಟ್ಟಿ/ಶಾಲಾ ವರ್ಗಾವಣಾ ಪತ್ರ/ಕ್ಯುಮಿಲೇಟೀವ್ ರೆಕಾರ್ಡ್ ನ ಜೆರಾಕ್ಸ್ ಪ್ರತಿ.
3. ಹುದ್ದೆಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯನ್ನು Lateral Entry ಮೂಲಕ ಅಭ್ಯಸಿಸಿದ್ದಲ್ಲಿ, Lateral Entry ವಿದ್ಯಾರ್ಹತೆಯ ಎಲ್ಲಾ ಅಂಕ ಪಟ್ಟಿಗಳನ್ನು ಮತ್ತು ಹುದ್ದೆಗೆ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಎಲ್ಲಾ ಸೆಮಿಸ್ಟರ್/ವರ್ಷಗಳ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು
4. ಇಲಾಖಾ ಅಭ್ಯರ್ಥಿಗಳು ಸಂಬಂದಪಟ್ಟ ನೇಮಕ ಪ್ರಾಧಿಕಾರಸ್ಥರಿಂದ ಪಡೆದ ಸೇವಾ ಪ್ರಮಾಣ ಪತ್ರದ ಮೂಲ ಪ್ರತಿ.
5. ಸಾರ್ವಜನಿಕ ಉದ್ದಿಮೆ/ಕರ್ನಾಟಕ ಸರ್ಕಾರ/ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದಲ್ಲಿ ಸೂಕ್ತ ಪ್ರಾಧಿಕಾರಸ್ಥರಿಂದ ಪಡೆದ ನಿರಾಕ್ಷೇಪಣಾ ಪತ್ರದ ಮೂಲ ಪ್ರತಿ
6. ವರ್ಗವಾರು ಮೀಸಲಾತಿಗಾಗಿ ತಹಸೀಲ್ದಾರ್‌ರವರಿಂದ ಪಡೆದಿರುವ ಜಾತಿ/ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿ.
7. ಗ್ರಾಮೀಣ ಅಭ್ಯರ್ಥಿಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರಿಂದ ನಿಗದಿತ ನಮೂನೆಯಲ್ಲಿ ಪಡೆದ ಪ್ರಮಾಣಪತ್ರಕ್ಕೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ಸಹಿ ಪಡೆದ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳು.
8. ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಬಯಸಿದಲ್ಲಿ ತಾವು ಕ್ರೀಮಿ ಲೇಯರ್ ವ್ಯಾಪ್ತಿಗೆ ಒಳಪಡುವುದಿಲ್ಲವೆಂಬ ಬಗ್ಗೆ ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪಡೆದ ಪ್ರಮಾಣಪತ್ರದ ಜೆರಾಕ್ಸ್ ಪ್ರತಿಗಳು
9. ಮಾಜಿ ಸೈನಿಕರಾಗಿದ್ದಲ್ಲಿ ಸೇನೆಯಲ್ಲಿ 15 ವರ್ಷಗಳ ಸೇವೆ ಸಲ್ಲಿಸಿರುವ ಬಗ್ಗೆ ಡಿಸ್‌ಚಾರ್ಜ್ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳು.
10. ಯೋಜನಾ ನಿರಾಶ್ರಿತ/ಕನ್ನಡ ಮಾಧ್ಯಮ ವ್ಯಾಸಂಗ ಮೀಸಲಾತಿ ಕೋರಿದ್ದಲ್ಲಿ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ
11. ಅಂಗವಿಕಲ ಅಭ್ಯರ್ಥಿಗಳು ಜಾಹೀರಾತಿನಲ್ಲಿ ತಿಳಿಸಿರುವಂತೆ ಸರ್ಕಾರವು ನಿಗದಿಪಡಿಸಿದ ನಮೂನೆಯಲ್ಲಿ ಸೂಕ್ತ ಪ್ರಾಧಿಕಾರಸ್ಥರಿಂದ ಪಡೆದ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳು.
12. ಗಣಕ ಜ್ಞಾನ ಹೊಂದಿರುವ ಬಗ್ಗೆ ಪೂರಕ ಪ್ರಮಾಣ ಪತ್ರದ ಮೂಲ ಪ್ರತಿ (ಸಹಾಯಕ ಲೆಕ್ಕಿಗ, ಅಂಕಿಅಂಶ ಸಹಾಯಕ ಹುದ್ದೆಗಳಿಗೆ)
13. ಚಾಲ್ತಿಯಲ್ಲಿರುವ ಭಾರಿ ವಾಹನ ಚಾಲನಾ ಪರವಾನಗಿ ಪ್ರಸ್ತುತ ಹೊಂದಿದ್ದಲ್ಲಿ ಜೆರಾಕ್ಸ್ ಪ್ರತಿ ಹಾಜರುಪಡಿಸುವುದು. (ಕುಶಲಕರ್ಮಿ ಹುದ್ದೆಗೆ).
14. ಚಾಲ್ತಿಯಲ್ಲಿರುವ ಲಘು ವಾಹನ ಚಾಲನಾ ಪರವಾನಗಿ ಪ್ರಸ್ತುತ ಹೊಂದಿದ್ದಲ್ಲಿ ಜೆರಾಕ್ಸ್ ಪ್ರತಿ ಹಾಜರುಪಡಿಸುವುದು. (ತಾಂತ್ರಿಕ ಸಹಾಯಕ ಹುದ್ದೆಗೆ).

ಮೇಲ್ಕಂಡ ಮಾದರಿಯಲ್ಲಿ ಮೂಲ ದಾಖಲಾತಿಗಳನ್ನು ಪ್ರತ್ಯೇಕವಾಗಿ ಜೋಡಿಸಿಕೊಂಡು ಮೂಲ ದಾಖಲಾತಿ ಪರಿಶೀಲನಾ ಅಧಿಕಾರಿಗಳ ಮುಂದೆ ಹಾಜರುಪಡಿಸುವುದು.

**ಅಭ್ಯರ್ಥಿಗಳಿಗೆ ವೈಯಕ್ತಿಕ ಸಂದರ್ಶನ ಹಾಗೂ ಸಂದರ್ಶನಕ್ಕೆ ಅಂಕಗಳು ಇರುವುದಿಲ್ಲ. ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಶೇಕಡವಾರು ಅಂಕ ಹಾಗೂ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (CAT) ಯಲ್ಲಿ ಪಡೆದ ಅಂಕಗಳನ್ನು ಆಧರಿಸಿ ಮೆರಿಟ್ ಆಧಾರದ ಮೇಲೆ ನೇಮಕಾತಿ ಮಾಡುವುದರಿಂದ ಅಭ್ಯರ್ಥಿಗಳು ಯಾವುದೇ ಶಿಫಾರಸ್ಸು, ಪ್ರಭಾವ ಹಾಗೂ ಆಮಿಷಗಳಿಗೆ ಅವ್ಯವಹಾರಗಳಿಗೆ ಒಳಗಾಗಬಾರದೆಂದು ಈ ಮೂಲಕ ಸ್ಪಷ್ಟಪಡಿಸಿದೆ.**